**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/05/ಇಎಪಿ/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು
ದಿನಾಂಕ: 26.03.2024.

## ಸುತ್ತೋಲೆ

ವಿಷಯ: ಸಿ-03 ಮತ್ತು ಸಿ-09 ಪಠ್ಯಕ್ರಮಗಳಲ್ಲಿ ಪ್ರವೇಶ ಪಡೆದಿರುವ ಹಾಗೂ ಸಿ-15 ಪಠ್ಯಕ್ರಮದಲ್ಲಿ (2017-18 ನೇ ಶೈಕ್ಷಣಿಕ ಸಾಲಿನವರೆಗೆ) ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಮೇ-2024 ರ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಇಡಿ/150/ಡಿಟಿಇ/2023, ದಿನಾಂಕ: 24.11.2023.
2. ದಿನಾಂಕ: 25.01.2024 ರಂದು ಜರುಗಿದ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ 188 ನೇ ಕೇಂದ್ರ ಸಭೆಯ ನಿರ್ಣಯ – 188.3.11.
3. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಬಿಟಿಇ/05/ಇಎಪಿ/2023, ದಿನಾಂಕ: 16/02/2024.

*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದನ್ವಯ ಹಾಗೂ ಉಲ್ಲೇಖ (2) ರ ತಾಂತ್ರಿಕ ಪರೀಕ್ಷಾ ಮಂಡಳಿಯ 188 ನೇ ಕೇಂದ್ರ ಸಭೆಯ ನಿರ್ಣಯದಂತೆ ಸಿ-03 ಮತ್ತು ಸಿ-09 ಪಠ್ಯಕ್ರಮಗಳಲ್ಲಿ ಪ್ರವೇಶ ಪಡೆದಿರುವ ಹಾಗೂ ಸಿ-15 ಪಠ್ಯಕ್ರಮದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2017-18 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24 ನೇ ಶೈಕ್ಷಣಿಕ ಸಾಲಿನಲ್ಲಿ ನಡೆಯುವ ಮೇ-2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ನೀಡಿ ಉಲ್ಲೇಖ (3) ರ ಈ ಕಛೇರಿ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಸದರಿ ಸಾಲುಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಮೇ-2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ಆಗಿರುವ ಕಾರಣ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳು ಸ್ಥಳೀಯ ದಿನ/ವೃತ್ತ ಪತ್ರಿಕೆಗಳಲ್ಲಿ ಹಾಗೂ ವಿವಿಧ ಮುದ್ರಣ/ವಿದ್ಯುನ್ಮಾನ ಮಾಧ್ಯಮಗಳಲ್ಲಿ ಈ ಕುರಿತು ಪರಿಣಾಮಕಾರಿಯಾಗಿ ಪ್ರಚುರ ಪಡಿಸಲು ಹಾಗೂ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತರಲು ತಿಳಿಸಲಾಗಿದೆ.

**ಕಾರ್ಯದರ್ಶಿ**
ತಾಂತ್ರಿಕ ಪರೀಕ್ಷಾ ಮಂಡಳಿ
ಬೆಂಗಳೂರು.

ಇವರಿಗೆ:

ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ:
1. ಆಯುಕ್ತರ ಆಪ್ತಶಾಖೆ – ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತಶಾಖೆ – ಅವಗಾಹನೆಗಾಗಿ.
3. ಜಂಟಿ ನಿರ್ದೇಶಕರು (ಸಿಡಿಸಿ), ತಾಂ.ಶಿ.ಇ, ಬೆಂಗಳೂರು.
4. ಸಹಾಯಕ ನಿರ್ದೇಶಕರು (ಎಸಿಎಂ).
5. ಇ-ಆಡಳಿತ ವಿಭಾಗ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).
6. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
7. ರಿಜಿಸ್ಟ್ರಾರ್ (ಪರೀಕ್ಷೆ).
8. ಕಾರ್ಯದರ್ಶಿಯವರ ಆಪ್ತಶಾಖೆ.
9. ಉಪ ನಿರ್ದೇಶಕರು (ಪರೀಕ್ಷೆ).
10. ಅಧೀಕ್ಷಕರು ಆರ್.ಡಿ.ಎಂ (01) ರಿಂದ (15).
11. ಗಣಕ ಕೇಂದ್ರ ವಿಭಾಗ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.